ಕರ್ನಾಟಕ ವಿಧಾನ ಸಭೆ ...
KARNATAKA LEGISLATIVE ASSEMBLY RESEARCH AND REFERENCE ...

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಬಿಜೆಪಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 13/11/19

# ಇಂದು ಬಿಜೆಪಿ ಪಟ್ಟಿ ಫೈನಲ್

## ಕೋರ್ ಕಮಿಟಿ ಸಭೆ | 15 ವಿಧಾನಸಭಾ ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆ

▪ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಅನರ್ಹರ ಬಗ್ಗೆ ಸುಪ್ರೀಂಕೋರ್ಟ್‌ನಿಂದ ತೀರ್ಪು ಹೊರಬರುವ ಹಿನ್ನೆಲೆ ಬಿಜೆಪಿ ಕೋರ್ ಕಮಿಟಿ ಸಭೆ ಬುಧವಾರ ಮಧ್ಯಾಹ್ನ 3 ಗಂಟೆಗೆ ನಡೆಯಲಿದೆ. 15 ವಿಧಾನಸಭೆ ಕ್ಷೇತ್ರಗಳಲ್ಲಿ ಚುನಾವಣೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಸುಪ್ರೀಂ ತೀರ್ಪಿನ ಮೇಲೆಯೆ ರಾಜಕೀಯ ತೀವ್ರ ಸ್ವರೂಪ ಪಡೆದುಕೊಳ್ಳುವ ಕಾರಣ ಈ ಬೆಳವಣಿಗೆಯನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಿದೆ.

ಚುನಾವಣೆಯಲ್ಲಿ ಅನರ್ಹರಿಗೆ ಸ್ಪರ್ಧೆ ಮಾಡಲು ಅವಕಾಶ ಮಾಡಿಕೊಡುವ ಸಾಧ್ಯತೆ ಪರಿಗಣಿಸಿ ಒಂದು ಹಂತದ ಚುನಾವಣೆ ಸಿದ್ಧತೆಯನ್ನು ಬಿಜೆಪಿ ಮಾಡಿದೆ. ಒಂದೊಮ್ಮೆ ಸ್ಪರ್ಧೆ ಮಾಡಲು ಅನರ್ಹರಿಗೆ ಅವಕಾಶ ನಿರಾಕರಿಸಿದರೆ, ಪರ್ಯಾಯವಾಗಿ ಏನೇನು ಮಾಡಬೇಕೆನ್ನುವ ಬಗ್ಗೆಯೂ ಚರ್ಚೆ ನಡೆದಿವೆ.

ಸಿಎಂ ಯಡಿಯೂರಪ್ಪ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ನೇತೃತ್ವದಲ್ಲಿ ನಡೆಯಲಿರುವ ಸಭೆಯಲ್ಲಿ 15 ಕ್ಷೇತ್ರಗಳಿಗೂ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅನರ್ಹರ ಪರವಾಗಿ ತೀರ್ಪು ಬಂದರೆ ಎಲ್ಲ ಕ್ಷೇತ್ರಗಳಲ್ಲಿಯೂ ಅವರನ್ನೇ ಕಣಕ್ಕಿಳಿಸಲಾಗುವುದು ಎಂದು ಮೂಲಗಳು ತಿಳಿಸಿವೆ. ಅನರ್ಹರ ಸ್ಪರ್ಧೆಗೆ ಅವಕಾಶ ನಿರಾಕರಿಸಿದರೆ ಯಾರಿಗೆ ಟಿಕೆಟ್ ನೀಡಬೇಕು ಎನ್ನುವ ಬಗ್ಗೆ ಗೊಂದಲ ಉಂಟಾಗಲಿದ್ದು, ಆ ಬಗ್ಗೆಯೂ ಒಂದಿಷ್ಟು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. 9 ಕ್ಷೇತ್ರಗಳಲ್ಲಿ ಅನರ್ಹರ ಕುಟುಂಬಕ್ಕೆ ಟಿಕೆಟ್ ನೀಡಿ ಇನ್ನುಳಿದ 6 ಕ್ಷೇತ್ರಗಳಲ್ಲಿ ಬಿಜೆಪಿ ಸ್ಪರ್ಧೆ ಮಾಡುವ ಲೆಕ್ಕಾಚಾರಗಳು ಇವೆ.




## ಹೇಳಿಕೆ ನೀಡದಂತೆ ಸಿಎಂ ಸೂಚನೆ



ಬೆಂಗಳೂರು: ಅನರ್ಹರ ಕ್ಷೇತ್ರಗಳಲ್ಲಿ ನಡೆಯಲಿರುವ ಉಪಚುನಾವಣೆಗೆ ಯಾರಿಗೆ ಟಿಕೆಟ್ ನೀಡಬೇಕೆಂಬ ವಿಚಾರದಲ್ಲಿ ಬಾಯಿಗೆ ಬಂದಂತೆ ಹೇಳಿಕೆಗಳನ್ನು ನೀಡಬೇಡಿ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಸಚಿವರು ಹಾಗೂ ಬಿಜೆಪಿ ಮುಖಂಡರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಅನರ್ಹರ ಕುರಿತು ಬುಧವಾರ ಸುಪ್ರೀಂಕೋರ್ಟ್ ತೀರ್ಪು ಹೊರ ಬೀಳಲಿದೆ. ಆನಂತರ ಪಕ್ಷ ಯಾರಿಗೆ ಟಿಕೆಟ್ ನೀಡಬೇಕು ಎಂಬುದನ್ನು ನಿರ್ಧರಿಸಲಿದೆ. ಯಾರೊಬ್ಬರು ಗೊಂದಲಗಳನ್ನು ಸೃಷ್ಟಿಸುವ ಹೇಳಿಕೆಗಳನ್ನು ನೀಡಬಾರದು ಎಂದು ಹೇಳಿದ್ದಾರೆ. ನಾನು, ಬಿಜೆಪಿ ರಾಜ್ಯಾಧ್ಯಕ್ಷ ಕಟೀಲ್ ಹಾಗೂ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಸಂತೋಷ್ ಸೇರಿ ಪಕ್ಷದ ಸಂಸದೀಯ ಮಂಡಳಿಗೆ ಅಭ್ಯರ್ಥಿಗಳ ಹೆಸರು ಶಿಫಾರಸು ಮಾಡುತ್ತೇವೆ. ಪಕ್ಷ ಅಂತಿಮ ತೀರ್ಮಾನ ಮಾಡುತ್ತದೆ. ಅನರ್ಹರು ಸರ್ಕಾರ ಬರಲು ತ್ಯಾಗ ಮಾಡಿದ್ದಾರೆ. ಅದನ್ನು ನಾವು ಮರೆಯಬಾರದು. ಅವರ ಪರ ಹೇಳಿಕೆ ನೀಡದಿದ್ದರೂ ಪರವಾಗಿಲ್ಲ, ಗೊಂದಲಗಳನ್ನು ಮೂಡಿಸಬೇಡಿ ಎಂದು ಮನವಿ ಮಾಡಿದ್ದಾರೆಂದು ಪಕ್ಷದ ಮೂಲಗಳು ಹೇಳಿವೆ. ಅನರ್ಹರಿಗೆ ಟಿಕೆಟ್ ನೀಡುವ ವಿಚಾರದಲ್ಲಿ ಕೆಲವೊಂದು ಗೊಂದಲಗಳಿದ್ದು, ಕೆಲ ಅನರ್ಹರಿಗೆ ಟಿಕೆಟ್ ನೀಡುವುದಕ್ಕೆ ಪಕ್ಷದಲ್ಲಿ ವಿರೋಧ ವ್ಯಕ್ತವಾಗಿದೆ. ಆದ್ದರಿಂದಲೇ ಯಡಿಯೂರಪ್ಪ ಈ ಸೂಚನೆ ನೀಡಿದ್ದಾರೆಂದು ಹೇಳಲಾಗುತ್ತಿದೆ.

## ರೂಮಿಗಾಗಿ ಹೆಬ್ಬಾರ್ ರಂಪಾಟ



ನವದೆಹಲಿ: ಅನರ್ಹ ಶಾಸಕನೆಂದು ಕರ್ನಾಟಕ ಭವನದಲ್ಲಿ ವಾಸ್ತವ್ಯಕ್ಕೆ ಕೊಠಡಿ ನೀಡದ ಸಿಬ್ಬಂದಿ ವಿರುದ್ಧ ಶಿವರಾಮ್ ಹೆಬ್ಬಾರ್ ಕೆಂಡ ಕಾರಿದ ಘಟನೆ ಮಂಗಳವಾರ ರಾತ್ರಿ ನಡೆದಿದೆ. ಬುಧವಾರ ಸುಪ್ರೀಂ ಕೋರ್ಟ್ ತೀರ್ಪು ಹಿನ್ನೆಲೆಯಲ್ಲಿ ದೆಹಲಿಗೆ ಬಂದ ಹೆಬ್ಬಾರ್, ಉಳಿದುಕೊಳ್ಳಲು ಭವನಕ್ಕೆ ತೆರಳಿದ್ದರು. ಆದರೆ ಸಿಬ್ಬಂದಿ ಧೋರಣೆಗೆ ಸಿಟ್ಟಾದ ಅವರು 'ಯಾರ್ರಿ ಹೇಳಿದ್ದು, ನಾನು ಮಾಜಿ ಶಾಸಕ ಅಂತ. ನಾನಿನ್ನೂ ಶಾಸಕನೇ, ರೂಮ್ ಕೊಡೋಕೆ ಏನ್ರೀ ನಿಮ್ಗೆ ಸಮಸ್ಯೆ' ಎಂದು ಗುಡುಗಿದರು. ಆದರೆ ಎಷ್ಟೇ ಬೊಬ್ಬೆ ಇಟ್ಟರೂ ಸಿಬ್ಬಂದಿ ಮಾತ್ರ ರೂಮ್ ನೀಡಲು ಒಪ್ಪಲಿಲ್ಲ. ಹೀಗಾಗಿ ಖಾಸಗಿ ಹೋಟೆಲ್ ಕಡೆ ಮುಖ ಮಾಡುವುದು ಹೆಬ್ಬಾರ್‌ಗೆ ಅನಿವಾರ್ಯವಾಯಿತು.



ಸುಳ್ಳು ಹೇಳುವುದರಲ್ಲಿಯೇ ಕಾಂಗ್ರೆಸ್ ನಾಯಕರು ಕಾಲಹರಣ ಮಾಡುತ್ತಿದ್ದಾರೆ. ಜನಬೆಂಬಲ ಇರುವ ಕಾರಣಕ್ಕೇ ನರೇಂದ್ರ ಮೋದಿ ಸರ್ಕಾರ ಮತ್ತೊಂದು ಅವಧಿಗೆ ಆಯ್ಕೆಯಾಗಿದೆ. ಜನರು ತಿರಸ್ಕರಿಸಿದರೂ ಕಾಂಗ್ರೆಸ್‌ಗೆ ಇನ್ನೂ ಬುದ್ಧಿ ಬಂದಿಲ್ಲ ಎಂದರು.

| [illegible] ಬಿಜೆಪಿ ಪ್ರಧಾನ ಕಾರ್ಯದರ್ಶಿ

## ಲಕ್ಷ್ಮೀ ಪಟ್ಟು ಗೋಕಾಕ್ ಬಿಕ್ಕಟ್ಟು

ಬೆಂಗಳೂರು: ಉಪಚುನಾವಣೆಗೆ ಇನ್ನೇನು ಅಭ್ಯರ್ಥಿಗಳನ್ನು ಅಂತಿಮಗೊಳಿಸುವ ಸಂದರ್ಭದಲ್ಲಿ ಕಾಂಗ್ರೆಸ್‌ಗೆ ಗೋಕಾಕ್ ಕ್ಷೇತ್ರದ ವಿಚಾರವಾಗಿ ಬಿಕ್ಕಟ್ಟು ಎದುರಾಗಿದೆ.

ಜಾರಕಿಹೊಳಿ ಸಹೋದರರಾದ ಲಖನ್‌ಗೆ ಟಿಕೆಟ್ ಅಂತಿಮಗೊಳಿಸಲಾಗಿತ್ತು. ಆದರೆ, ಸಿದ್ದರಾಮಯ್ಯ ಬೆಳಗಾವಿಗೆ ತೆರಳಿದ ವೇಳೆ ಜಾರಕಿಹೊಳಿ ಕುಟುಂಬಕ್ಕೆ ಟಿಕೆಟ್ ಕೊಡಬಾರದೆಂದು ಕಾರ್ಯಕರ್ತರ ವಲಯದಿಂದ ಒತ್ತಾಯ ಬಂದಿತ್ತು. ಈ ನಡುವೆ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಕೂಡ ಬಿಜೆಪಿಯ ಅಶೋಕ್ ನಿಂಗಯ್ಯ ಸ್ವಾಮಿ ಪೂಜಾರಿಗೆ ಟಿಕೆಟ್ ಕೊಡಿಸಲು ಪ್ರಯತ್ನ ನಡೆಸಿದ್ದಾರೆಂಬ ಸುದ್ದಿ ಮಾಜಿ ಸಚಿವ ಸತೀಶ್ ಜಾರಕಿಹೊಳಿ ನಿದ್ದೆಗೆಡಿಸಿದೆ.





» ಲಖನ್‌ಗೆ ಕೈ ಕೊಟ್ರೆ ತಟಸ್ಥ

» ಸತೀಶ್ ಜಾರಕಿಹೊಳಿ ಎಚ್ಚರಿಕೆ

ಒಂದು ವೇಳೆ ಲಖನ್‌ಗೆ ಟಿಕೆಟ್ ಕೊಡದೆ ಹೋದಲ್ಲಿ ಬೆಳಗಾವಿ ಜಿಲ್ಲೆಯ ಮೂರು ಕ್ಷೇತ್ರಗಳ ಉಪಚುನಾವಣೆಯಲ್ಲಿ ಕೆಲಸ ಮಾಡುವುದಿಲ್ಲ, ತಟಸ್ಥ ಧೋರಣೆ ಅನುಸರಿಸುವುದಾಗಿ ಸತೀಶ್ ಹೇಳಿದ್ದಾರೆಂದು ತಿಳಿದುಬಂದಿದೆ.

ಲಕ್ಷ್ಮೀ ಹೆಬ್ಬಾಳ್ಕರ್ ಬೆಳಗಾವಿಯಲ್ಲಿ ದಿನೇದಿನೆ ಪ್ರಭಾವಿಯಾಗಿ ಬೆಳೆಯುತ್ತಿರುವುದು ಜಾರಕಿಹೊಳಿ ಕುಟುಂಬಕ್ಕೆ ಅರಗಿಸಿಕೊಳ್ಳಲಾಗುತ್ತಿಲ್ಲ ಎಂಬ ಮಾತೂ ಇದೆ. ಈ ನಡುವೆ ಉಪಚುನಾವಣೆಯಲ್ಲಿ ಲಖನ್‌ಗೆ ಟಿಕೆಟ್ ತಪ್ಪಿದರೆ, ರಾಜಕೀಯವಾಗಿ ಆ ಕುಟುಂಬಕ್ಕೆ ಪೆಟ್ಟುಕೊಟ್ಟಂತಾಗುತ್ತದೆಂಬ ಲೆಕ್ಕಾಚಾರವಿದೆ ಎಂದು ಹೇಳಲಾಗುತ್ತಿದೆ. ಈ ಬೆಳವಣಿಗೆ ಪಕ್ಷದ ನಾಯಕರಿಗೂ ಇಕ್ಕಟ್ಟು ಸೃಷ್ಟಿಸಿದೆ. ಜಾರಕಿಹೊಳಿ ಕುಟುಂಬದ ವಿರುದ್ಧ ಬೆಳಗಾವಿಯಲ್ಲಿ ಅಸಮಾಧಾನ ಹೆಚ್ಚುತ್ತಿರುವ ಸಂದರ್ಭದಲ್ಲಿಯೇ ಗೋಕಾಕ್‌ಗೆ ಯಾರನ್ನು ಅಭ್ಯರ್ಥಿ ಮಾಡಬೇಕೆಂಬ ಬಗ್ಗೆ ಸ್ಪಷ್ಟತೆ ಮೂಡಿಲ್ಲ. ಈ ಬಗ್ಗೆ ವಿಜಯವಾಣಿಗೆ ಪ್ರತಿಕ್ರಿಯೆ ನೀಡಿದ ಲಕ್ಷ್ಮೀ ಹೆಬ್ಬಾಳ್ಕರ್, ಪಕ್ಷ ಏನು ಜವಾಬ್ದಾರಿ ಕೊಡುತ್ತದೋ ಆ ಕೆಲಸ ಮಾಡುತ್ತೇನೆ. ನಾನು ಅಭ್ಯರ್ಥಿಯನ್ನು ಕಣಕ್ಕಿಳಿಸಲು ಹೈಕಮಾಂಡ್ ಅಲ್ಲ, ಅದೆಲ್ಲ ಊಹಾಪೋಹ ಎಂದಿದ್ದಾರೆ.

10